ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಹೊಸದಾಗಿ ನಿರ್ಮಿಸಲಾದ ತಾಲ್ಲೂಕುಗಳಿಗೆ
ಮೂಲಭೂತ ಸೌಲಭ್ಯ ನೀಡುವ ಕುರಿತು

ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು)-

31 (360) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹೊಸದಾಗಿ ನಿರ್ಮಿಸಲಾದ ತಾಲ್ಲೂಕುಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಇದುವರೆಗೆ ನಿಗಧಿಪಡಿಸಲಾದ ಅನುದಾನವೆಷ್ಟು;

(ಆ) ಇಲ್ಲಿಯವರೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು; ಹಾಗೂ ಖರ್ಚು ಮಾಡಿದ ಅನುದಾನವೆಷ್ಟು;

(ಇ) ಸಂಪೂರ್ಣ ಮೂಲಭೂತ ವ್ಯವಸ್ಥೆ ಕಲ್ಪಿಸಲು ಇನ್ನೂ ಎಷ್ಟು ದಿನಗಳ ಕಾಲಾವಕಾಶಬೇಕು? (ವಿವರ ನೀಡುವುದು)